# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶಿವಮೊಗ್ಗ ಜಿಲ್ಲೆಯಲ್ಲಿ ಸ್ಥಾಪಿಸಲಾಗುತ್ತಿರುವ ವಿಮಾನ ನಿಲ್ದಾಣದ ನಿರ್ಮಾಣ (ಹಂತ 1) ಕಾಮಗಾರಿಗಳ ಅನುಷ್ಠಾನಕ್ಕಾಗಿ ಮೆ||ರೈಟ್ಸ್ ಸಂಸ್ಥೆಯು ಸಲ್ಲಿಸಿರುವ ಕಾನ್ಸೆಪ್ಟ್ ನೋಟ್‌ಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ. ಮೂಅಇ 60 ರಾಅವಿ 2015, ದಿನಾಂಕ:21.08.2019.
2. ಸರ್ಕಾರದ ಆದೇಶ ಸಂಖ್ಯೆ. ಮೂಅಇ 60 ರಾಅವಿ 2015, ದಿನಾಂಕ:21.08.2019.
3. ಸರ್ಕಾರದ ಆದೇಶ ಸಂಖ್ಯೆ. ಮೂಅಇ 60 ರಾಅವಿ 2015, ದಿನಾಂಕ: 2.12.2019.
4. ಸರ್ಕಾರದ ಆದೇಶ ಸಂಖ್ಯೆ. ಮೂಅಇ 60 ರಾಅವಿ 2015, ದಿನಾಂಕ: 03.01.2020
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಧಾರವಾಡ ಇವರ ಪತ್ರ ಸಂಖ್ಯೆ:ಮುಂಇ(ಉ):ತಾಸ-5/ಸಇಂ1/ಶಿ/ವಿಮಾನ ನಿಲ್ದಾಣ: 2019-20/07299, ದಿನಾಂಕ:29.01.2020.

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಶಿವಮೊಗ್ಗ ಕಿರು ವಿಮಾನ ಇಳದಾಣವನ್ನು ರಾಜ್ಯ ಸರ್ಕಾರವು ಕೆ.ಎಸ್.ಐ.ಐ.ಡಿ.ಸಿ ಸಂಸ್ಥೆಯ ಮೂಲಕ ರೂ.38.00 ಕೋಟಿಗಳ ಅಂದಾಜು ಮೊತ್ತದಲ್ಲಿ ಅಭಿವೃದ್ಧಿ ಪಡಿಸಲು ಸರ್ಕಾರದಿಂದ ಮಂಜೂರಾತಿಯನ್ನು ನೀಡಿ ಓದಲಾದ ಕ್ರಮ ಸಂಖ್ಯೆ (2) ರ ಆದೇಶದಲ್ಲಿ ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ಇವರಿಗೆ ಪ್ರಾರಂಭಿಕವಾಗಿ ರೂ.2.00/- ಕೋಟಿ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.

2. ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಆದೇಶದಲ್ಲಿ ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ:14.12.2019ರಂದು ನಡೆದ ಸಭೆಯ ನಡವಳಿಯ ಅನುಸಾರ ಶಿವಮೊಗ್ಗ ವಿಮಾನ ನಿಲ್ದಾಣ ಕಾಮಗಾರಿಯನ್ನು ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ಇವರ ನೇತೃತ್ವದಲ್ಲಿ ಲೋಕೋಪಯೋಗಿ ಇಲಾಖೆಯಿಂದ ಅನುಷ್ಠಾನಗೊಳಿಸಲು ಆದೇಶಿಸಿ ಅದರಂತೆ ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ಇವರಿಗೆ ರೂ.4.00/- ಕೋಟಿ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.



Scanned by CamScanner

3. ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಶಿವಮೊಗ್ಗ ತಾಲ್ಲೂಕು ಸೋಗಾನೆ ಗ್ರಾಮದ ಪರಿಮಿತಿಯಲ್ಲಿ ವಿಮಾನ ನಿಲ್ದಾಣ ನಿರ್ಮಾಣದ ಆವರಣದಲ್ಲಿ ಕಾಂಪೌಂಡ್ ವಾಲ್ ನಿರ್ಮಾಣ ಕಾಮಗಾರಿಯ ಅಂದಾಜು ಪಟ್ಟಿಯ ಲೋಕೋಪಯೋಗಿ ಇಲಾಖೆಯ ಪ್ರಸ್ತಾವನೆಗೆ ಆಡಳತಾತ್ಮಕ ಅನುಮೋದನೆ ನೀಡಲು ಸರ್ಕಾರದ ಮಂಜೂರಾತಿಯನ್ನು ನೀಡಿದೆ.

4. ಮೇಲೆ ಓದಲಾದ ಕ್ರಮ ಸಂಖ್ಯೆ (5) ರ ಪತ್ರದಲ್ಲಿ ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಧಾರವಾಡ ಇವರು ಮೆ॥ರೈಟ್ಸ್ ಸಂಸ್ಥೆಯವರು ವಿಮಾನ ನಿಲ್ದಾಣ(ಹಂತ 1) ಕಾಮಗಾರಿಗೆ ಸಂಬಂಧಿಸಿದಂತೆ ರೂ.220.00 ಕೋಟಿಗಳ ಅವಶ್ಯಕತೆ ಇರುವುದಾಗಿ ತಿಳಿಸಿ ಸಲ್ಲಿಸಿರುವ ಕಾನ್ಸೆಪ್ಟ್ ನೋಟ್‌ಗೆ/ಕಾಮಗಾರಿಗೆ ಆಡಳತಾತ್ಮಕ ಅನುಮೋದನೆ ನೀಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ

5. ಪ್ರಸ್ತಾವನೆಯನ್ನು ಕೂಲಕುಂಶವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ. ಮೂಅಇ 60 ರಾಅವಿ 2018,**
**ಬೆಂಗಳೂರು, ದಿನಾಂಕ:06.02.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶಿವಮೊಗ್ಗ ತಾಲ್ಲೂಕು ಸೋಗಾನೆ ಗ್ರಾಮದ ಪರಿಮಿತಿಯಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಅಂಶಗಳಿಗೆ ಸರ್ಕಾರದ ಆಡಳತಾತ್ಮಕ ಅನುಮೋದನೆಯನ್ನು ನೀಡಲಾಗಿದೆ.

i. ಶಿವಮೊಗ್ಗ ವಿಮಾನ ನಿಲ್ದಾಣ (ಹಂತ-1) ಕಾಮಗಾರಿಗಾಗಿ ಮೆ॥ ರೈಟ್ಸ್ ಸಂಸ್ಥೆಯು ಸಲ್ಲಿಸಿರುವ ಕಾನ್ಸೆಪ್ಟ್ ನೋಟ್‌ಗೆ ಆಡಳತಾತ್ಮಕ ಅನುಮೋದನೆ.

ii. ಶಿವಮೊಗ್ಗ ವಿಮಾನ ನಿಲ್ದಾಣದ (ಹಂತ-1) ಕಾಮಗಾರಿಗಳಿಗಾಗಿ ಮೆ॥ರೈಟ್ಸ್ ಸಂಸ್ಥೆಯು ಸಲ್ಲಿಸಿರುವ ಅಂದಾಜು ವೆಚ್ಚ ರೂ.220 ಕೋಟಿಗಳಿಗೆ ಆಡಳತಾತ್ಮಕ ಅನುಮೋದನೆ.

iii. ಶಿವಮೊಗ್ಗ ವಿಮಾನ ನಿಲ್ದಾಣದ ಕಾಮಗಾರಿಗಳಿಗೆ ನಿರ್ದಿಷ್ಟವಾಗಿ ತಗುಲಲಿರುವ ಅನುದಾನ ರೂ.220.00 ಕೋಟಿಗಳನ್ನು 2020-21ನೇ ಆರ್ಥಿಕ ಸಾಲಿನಲ್ಲಿ ರಾಜ್ಯ ಸರ್ಕಾರವು ಒದಗಿಸಲು ಹಾಗೂ ಲೆಕ್ಕಶೀರ್ಷಿಕೆ "5465-01-190-1-05-132- ಸಣ್ಣ ವಿಮಾನ ನಿಲ್ದಾಣಗಳ ಅಭಿವೃದ್ಧಿ-ಬಂಡವಾಳ ವೆಚ್ಚಗಳು" ಇದರಡಿಯಲ್ಲಿ ಭರಿಸಲು ಅನುಮೋದನೆ.

iv. ಶಿವಮೊಗ್ಗ ವಿಮಾನ ನಿಲ್ದಾಣದ ಕಾರ್ಯಾಚರಣೆಯನ್ನು ನಡೆಸಲು ಎಲ್ಲಾ ಕ್ರಮಗಳನ್ನು ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯು ತೆಗೆದುಕೊಳ್ಳಲು ಅನುಮೋದನೆ.



Scanned by CamScanner

2. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: 365 ದಿನಾಂಕ:01.02.2020 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪಾಪಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ.

ಗೆ:

1. ಪ್ರಧಾನ ಮಹಾಲೇಖಪಾಲರು (ಆಡಿಟ್ –1, 2, 3/ A & E), ಪ್ರಧಾನ ಮಹಾಲೇಖಪಾಲರ ಕಛೇರಿ (ಕರ್ನಾಟಕ), ಎ.ಎ.ಡಿ. ಸೆಕ್ಷನ್, ಮೈನ್ ಬಿಲ್ಡಿಂಗ್, ಕೆ.ಪಿ.ಎಸ್.ಸಿ. ಕಛೇರಿ ಎದುರು, ಬೆಂಗಳೂರು –01.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕೆಎಸ್ಐಐಡಿಸಿ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
4. ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
5. ಮುಖ್ಯ ಇಂಜಿನಿಯರ್, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಸಂಪರ್ಕ ಮತ್ತು ಕಟ್ಟಡ (ಉತ್ತರ), ಸರ್.ಎಂ.ವಿಶ್ವೇಶ್ವರಯ್ಯ ಮಾರ್ಗ, ಧಾರವಾಡ
6. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ. ಗೋಪುರ, ಬೆಂಗಳೂರು.
7. ಯೋಜನಾ ನಿರ್ದೇಶಕರು, ಖಜಾನೆ–2, ಗಾಂಧಿನಗರ, ಬೆಂಗಳೂರು.
8. ಹಿರಿಯ ನಿರ್ದೇಶಕರು, ಯೋಜನೆ ಹಾಗೂ ಸಂಪನ್ಮೂಲ ವಿಭಾಗ, ಯೋಜನೆ ಇಲಾಖೆ, ಬೆಂಗಳೂರು.
9. ನಿರ್ದೇಶಕರು, PM & I ವಿಭಾಗ, ಯೋಜನಾ ಇಲಾಖೆ.
10. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ಬೆಂಗಳೂರು.
11. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ). (ಸ.ಸಂಪುಟ–ಸಂಖ್ಯೆ: C-63/2020), ವಿಧಾನ ಸೌಧ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ–1).

ಪ್ರತಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಮಾನ್ಯ ಮುಖ್ಯಮಂತ್ರಿಯವರ ಸಚಿವಾಲಯ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ–2(ಸಮನ್ವಯ) ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

---

ಕ್ರಸಂ: ಮುಇಂ(ಉ): ತಾಂಸ–5: ಸಇಂ–3(ಬಿ): ಶಿವಿವಿ: 2019–20: 08209

ಮುಖ್ಯ ಇಂಜನೀಯರರ ಕಛೇರಿ,
ಸಂಪರ್ಕ ಮತ್ತು ಕಟ್ಟಡ (ಉತ್ತರ),
ಧಾರವಾಡ, ದಿನಾಂಕ: 27 FEB 2020

ಪ್ರತಿಯನ್ನು ಅಧೀಕ್ಷಕ ಇಂಜನೀಯರರು, ಲೋಬಂ ಮತ್ತು ಒಜಸಾಇ ವೃತ್ತ, ಶಿವಮೊಗ್ಗ ಹಾಗೂ ಕಾರ್ಯನಿರ್ವಾಹಕ ಇಂಜನೀಯರರು, ಲೋಬಂ ಮತ್ತು ಒಜಸಾಇ ವಿಭಾಗ, ಶಿವಮೊಗ್ಗ(ವಿಶೇಷ) ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.

27/2/2020
ಮುಖ್ಯ ಇಂಜನೀಯರರ ಪರವಾಗಿ,
ಸಂಪರ್ಕ ಮತ್ತು ಕಟ್ಟಡ (ಉತ್ತರ), ಧಾರವಾಡ

Scanned by CamScanner